ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಕನ್ನಡ, ಸಂಸ್ಕೃತಿ ಮತ್ತು ಗಡಿ ಅಭಿವೃದ್ಧಿಗೆ ನೀಡಿರುವ ಅನುದಾನದ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

308 (366) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗಡಿ ಅಭಿವೃದ್ಧಿ ಮಂಡಳಿಗೆ ನೀಡಲಾಗಿರುವ ಅನುದಾನ ಎಷ್ಟು ; (ಗಡಿವಾರು ಜಿಲ್ಲೆಗಳ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) 2018-19ನೇ ಸಾಲಿನ ಆಯ-ವ್ಯಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಒದಗಿಸಲಾಗಿರುವ ಅನುದಾನ ಎಷ್ಟು ;

(ಇ) ಒದಗಿಸಿರುವ ಅನುದಾನದಲ್ಲಿ ಇಲ್ಲಿಯ ತನಕ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿವರವಾದ ಮಾಹಿತಿಯನ್ನು ನೀಡುವುದು)

(ಈ) 2018-19ನೇ ಸಾಲಿನಲ್ಲಿ ಗಡಿ ಅಭಿವೃದ್ಧಿ ಮಂಡಳಿಗೆ ನೀಡಿರುವ ಅನುದಾನವೆಷ್ಟು ; ಹಾಗೂ ಈ ಅನುದಾನವನ್ನು ಸಮನಾಗಿ ಗಡಿ ಜಿಲ್ಲೆಗಳ ತಾಲ್ಲೂಕುಗಳಿಗೆ ಹಂಚಿಕೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಉ) ಗಡಿ ಅಭಿವೃದ್ಧಿ ಪ್ರದೇಶಗಳಿಗೆ ಅನುದಾನವನ್ನು ನೀಡುವಾಗ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಊ) ಗಡಿ ಅಭಿವೃದ್ಧಿ ಮಂಡಳಿಯ ಅನುದಾನವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ನೀಡಲು ಅವಕಾಶವಿದೆ ? (ವಿವರ ಒದಗಿಸುವುದು)